# ಗಡಿಕನ್ನಡಿಗ

ಸಂಪಾದಕ:ಮುರುಗೇಶ ಬಿ.ಶಿವಪೂಜಿ

www.gadikannadiga.com

ಪ್ರಾದೇಶಿಕ ದಿನಪತ್ರಿಕೆ

ಬೆಳಗಾವಿ,ಕೊಪ್ಪಳ,ಗದಗ, ವಿಜಯಪುರ, ವಿಜಯನಗರ ಬಳ್ಳಾರಿಗಳಿಂದ ಏಕಕಾಲಕ್ಕೆ ಪ್ರಕಟಿತ

ಸಂಪುಟ:22/ಸಂಚಿಕೆ:102 RNI NO.KAR KAN/2003/10452:No./PMG/KA/NK/BM/743/24-26 ಗುರುವಾರ ದಿನಾಂಕ: 14–03–2024 ಪುಟಗಳು: 6 ಬೆಲೆ:1 ರೂ ☎ 9480498694 / Email-mbshivapuji@gmail.com2


### ಬಿಜೆಪಿಗೆ ಲೋಕಸಭಾ ಚುನಾವಣೆಯಲ್ಲಿ ಸೋಲಿನ ಭಯ ಕಾಡುತ್ತಿದೆ

## ಸಿಎಎ ಜಾರಿ: ಬಿಜೆಪಿಯ ಚುನಾವಣಾ ಗಿಮಿಕ್ : ಮುಖ್ಯಮಂತ್ರಿ ಸಿದ್ಧರಾಮಯ್ಯ

ಉಡುಪಿ, ಮಾರ್ಚ್ 13: ಪೌರತ್ವ ಕಾಯ್ದೆಯನ್ನು ಕೇವಲ ಚುನಾವಣೆಯ ದೃಷ್ಟಿಯಿಂದ ಕೇಂದ್ರ ಜಾರಿ ಮಾಡಿದ್ದು, ಬಿಜೆಪಿಯವರಿಗೆ ಲೋಕಸಭಾ ಚುನಾವಣೆಯಲ್ಲಿ ಸೋಲಿನ ಭಯ ಕಾಡುತ್ತಿರುವುದರಿಂದ ಈ ರೀತಿಯ ಗಿಮಿಕ್ಸ್ ಗಳನ್ನು ಮಾಡಿದ್ದಾರೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು.ಅವರು ಇಂದು ಉಡುಪಿಯಲ್ಲಿ ಮಾಧ್ಯಮದವರೊಂದಿಗೆ ಮಾತನಾಡಿದರು.

ರಾಜ್ಯದಲ್ಲಿ ಪೌರತ್ವ ಕಾಯ್ದೆ ಜಾರಿ ಬಗ್ಗೆ ಮುಖ್ಯಮಂತ್ರಿಗಳ ನಿಲುವಿನ ಬಗ್ಗೆ ಕೇಳಿದ ಪ್ರಶ್ನೆಗೆ ಉತ್ತರಿಸಿ, ಇಷ್ಟು ವರ್ಷಗಳ ಕಾಲ ಈ ಬಗ್ಗೆ ಮೌನವಹಿಸಿ , ಚುನಾವಣೆಯ ಹೊಸ್ತಿಲಲ್ಲಿ ಜಾರಿಗೊಳಿಸಿದ್ದಾರೆ.

ರಾಜ್ಯದಲ್ಲಿ ಸಿಎಎ ಜಾರಿ ಬಗ್ಗೆ ನಾಳೆ ನಡೆಯಲಿರುವ ಸಚಿವ ಸಂಪುಟ ಸಭೆಯಲ್ಲಿ ಚರ್ಚಿಸಲಾಗುವುದು ಎಂದರು.

ಪಕ್ಷಕ್ಕೆ ಬಲ: ಜಯಪ್ರಕಾಶ್ ಹೆಗಡೆಯವರು ಮತ್ತೊಮ್ಮೆ ಕಾಂಗ್ರೆಸ್ ಪಕ್ಷಕ್ಕೆ ಸೇರ್ಪಡೆಯಾಗಿರುವುದು ಕರಾವಳಿ ಪ್ರದೇಶದಲ್ಲಿ ಪಕ್ಷಕ್ಕೆ ಬಲ ತುಂಬಿದಂತಾಗಿದೆ ಎಂದರು.

ಮೈಸೂರು ಸಂಸದ ಪ್ರತಾಪ್ ಸಿಂಹ ಅವರಿಗೆ ಈ ಬಾರಿ ಲೋಕಸಭಾ ಚುನಾವಣೆ ಟಿಕೆಟ್ ನೀಡದೇ ಯದುವೀರ್ ಅವರಿಗೆ ಟಿಕೆಟ್ ನೀಡುವ ನಿರ್ಧಾರವನ್ನು ಬಿಜೆಪಿ ಕೈಗೊಂಡಿರುವ ಕಾರಣದ ಬಗ್ಗೆ ನನಗೆ ಯಾವುದೇ ಮಾಹಿತಿ ಇಲ್ಲ ಎಂದರು.

## ಗಡಿ ಮತ್ತು ನದಿಗಳ ಸಂರರಕ್ಷಣಾ ಆಯೋಗದ ಸಭೆ

### ಗಡಿ ಸಮಸ್ಯೆ-ಅಹವಾಲು ಸ್ವೀಕರಿಸಲು ಸುವರ್ಣ ಸೌಧದಲ್ಲಿ ಗಡಿ ಆಯೋಗದ ಕಚೇರಿ ಸ್ಥಾಪನೆ: ಶಿವರಾಜ್ ಪಾಟೀಲ



ಬೆಳಗಾವಿ, ಮಾ.13–: ಸಾರ್ವಜನಿಕರು, ಕನ್ನಡಪರ ಸಂಘಟನೆಗಳ ಬೇಡಿಕೆಯಂತೆ ಗಡಿ ಹಾಗೂ ನದಿಗಳ ರಕ್ಷಣೆಗೆ ಸಂಬಂಧಿಸಿದಂತೆ ಸ್ಥಳೀಯ ಸಮಸ್ಯೆಗಳು ಮತ್ತು ಅಹವಾಲುಗಳನ್ನು ಸ್ವೀಕರಿಸಲು ಅನುಕೂಲ ವಾಗುವಂತೆ ಗಡಿ ಆಯೋಗದ ಕಚೇರಿಯೊಂದನ್ನು ಬೆಳಗಾವಿಯ ಸುವರ್ಣ ವಿಧಾನಸೌಧದಲ್ಲಿ ಸ್ಥಾಪಿಸಲಾಗುವುದು ಎಂದು ಕರ್ನಾಟಕ ಗಡಿ ಮತ್ತು ನದಿಗಳ ಸಂರಕ್ಷಣಾ ಆಯೋಗದ ಅಧ್ಯಕ್ಷರಾದ ಶಿವರಾಜ್ ಪಾಟೀಲ ತಿಳಿಸಿದರು. ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಬುಧವಾರ (ಮಾ.13) ನಡೆದ ಕರ್ನಾಟಕ ಗಡಿ ಮತ್ತು ನದಿಗಳ ರಕ್ಷಣಾ ಆಯೋಗದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಗಡಿ ಮತ್ತು ನದಿಗಳ ಆಯೋಗಕ್ಕೆ ಸುವರ್ಣ ವಿಧಾನಸೌಧದಲ್ಲಿ ಎರಡು ಕೊಠಡಿಗಳನ್ನು ನೀಡುವುದಾಗಿ ಜಿಲ್ಲಾಧಿಕಾರಿಗಳು ತಿಳಿಸಿದ್ದಾರೆ. ಸದರಿ ಆಯೋಗವನ್ನು ಪುನರ್ ರಚನೆಗೆ ಕ್ರಮ ಕೈಗೊಂಡು ಶೀಘ್ರವೇ ಸುವರ್ಣ ಸೌಧದಲ್ಲಿ ಕಚೇರಿ ಸ್ಥಾಪಿಸಿ ಕಚೇರಿಗೆ ಆಯೋಗದ ಸ್ಥಳೀಯ ಸದಸ್ಯರೊಬ್ಬರನ್ನು ನಿಯೋಜಿಸುವುದರ ಮೂಲಕ ಸ್ಥಳೀಯ ಗಡಿ ಹಾಗೂ ನದಿಗಳ ರಕ್ಷಣೆಗೆ ಸಂಬಂಧಿಸಿದಂತೆ ಜನರ, ಸಂಘ-ಸಂಸ್ಥೆಗಳ ಅಹವಾಲುಗಳನ್ನು ಸ್ವೀಕರಿಸಲು ಕ್ರಮ ಕೈಗೊಳ್ಳಲಾಗುವದು ಎಂದರು. ಗಡಿ ಸಮಸ್ಯೆಗಳನ್ನು ಸಂವಿಧಾನಾತ್ಮಕವಾಗಿ ಬಗೆಹರಿಸುವ ನಿಟ್ಟಿನಲ್ಲಿ ಪ್ರಯತ್ನಗಳು ನಿರಂತರವಾಗಿ ನಡೆದಿರುತ್ತವೆ. ಸರ್ವೋಚ್ಛ ನ್ಯಾಯಾಲಯದಲ್ಲಿ ಪ್ರಕರಣ ಪಟ್ಟಿಯಾದ ಬಳಿಕ ಸಮರ್ಥವಾಗಿ ವಾದ ಮಂಡನೆಗೆ ಎಲ್ಲ ಸಿದ್ಧತೆಗಳನ್ನು ಮಾಡಿಕೊಳ್ಳಲಾಗಿದೆ. ಗಡಿ ಸಮಸ್ಯೆಗಳನ್ನು ಸಂವಿಧಾನಾತ್ಮಕವಾಗಿ ಬಗೆಹರಿಸುವ ನಿಟ್ಟಿನಲ್ಲಿ ಪ್ರಯತ್ನಗಳು (2 ನೇ ಪುಟಕ್ಕೆ)

## ನೀರಿನ ಸಮಸ್ಯೆಯಾಗದಂತೆ ಅಧಿಕಾರಿಗಳಿಗೆ ಖಡಕ್ ಎಚ್ಚರಿಕೆ ನೀಡಿದ ಮೇಯರ್



ಬೆಳಗಾವಿ: ಮಹಾನಗರ ಪಾಲಿಕೆಯಲ್ಲಿ ನಡೆದ ಸಭೆಗೆ ನೀರಿನ ಸಮಸ್ಯೆ ಬಹಳ ಉಂಟಾಗಿದ್ದಕ್ಕೆ ಕಡಕ್ಕೆ ಎಚ್ಚರಿಕೆ ನೀಡಿದ ಮೇಯರ ಸವಿತಾ ಕಾಂಬಳೆ ಮಹಾನಗರಕ್ಕೆ ನೂರು ದಿನ ಮಾತ್ರ ಕುಡಿಯುವ ನೀರು ಸಂಪೂರ್ಣಕವಾಗಿ ಪೂರೈಕೆಯಾಗಲಿದೆ ಎಂದು ನೀರು ಸರಬರಾಜು ಹಾಗೂ L& T compny ಅವರು ಹೇಳಿದರು . ಬಳಿಕ ಸಮಸ್ಯೆಯಾಗಲಿದ್ದು, ಅಧಿಕಾರಿಗಳು ಬೇಜವಾಬ್ದಾರಿ ವಹಿಸುವುದು ಸರಿಯಲ್ಲ ಎಂದು ಮೇಯರ್ ಸವಿತಾ ಕಾಂಬಳೆ ಅಧಿಕಾರಿಗಳಿಗೆ ಎಚ್ಚರಿಕೆ ನೀಡಿದರು.

ಬುಧವಾರ ಮಹಾನಗರ ಪಾಲಿಕೆಯ ಸಭಾಂಗಣದಲ್ಲಿ ಆಯೋಜಿಸಲಾಗಿದ್ದು ವಿವಿಧ ಇಲಾಖೆಯ ಅಧಿಕಾರಿಗಳ ಜೊತೆ ಕುಡಿಯುವ ನೀರಿನ ಸಮಸ್ಯೆಯ ಕುರಿತು ಪೂರ್ವಭಾವಿ ಸಭೆಯಲ್ಲಿ ಮಾತನಾಡಿದರು. ಅಧಿಕಾರಿಗಳು ಯಾವುದೇ ಕಾರಣಕ್ಕೂ ಕುಡಿಯುವ ನೀರಿನ ಸಮಸ್ಯೆಯಾಗಬಾರದು ಎಂದರು.

ಏನು ಅರ್ಥ ಇಲ್ಲದಂಗೆ ಕೆಲಸ ಮಾಡುತ್ತಿದ್ದೆ ನೀರು ಸರಬರಾಜು ಅಧಿಕಾರಿ ಹಾಗೂ ಎಲ್ ಅಂಡ್ ಟಿ ಕಂಪನ ಅವರು ನಗರಸೇವಕರ ಚರ್ಚೆಗೆ ಮೌನರಾದ ಅಧಿಕಾರಿಗಳು ಮಹಾನಗರ ಪಾಲಿಕೆ ಸಭೆಯಲ್ಲಿ ಆಯುಕ್ತರಾದ ಶಿ ಲೋಕೇಶ್ ಮಹಾಪೌರು ಸವಿತಾ ಕಾಂಬಳೆ ಉಪ ಮಹಾಪೌರ ಆನಂದ್ ಚವಾಣ್ ಅಧಿಕಾರಗಳು ನಗರ ಸೇವಕರು ಪಾಲಿಕೆಯ ಅಧಿಕಾರಗಳು ಉಪಸ್ಥಿತರಿದ್ದರು

## ಗ್ರಾಮೀಣ ಕ್ಷೇತ್ರಕ್ಕೆ ಇನ್ನಷ್ಟು ಬೃಹತ್ ಯೋಜನೆಗಳನ್ನು ತರಲು ಕ್ರಮ : ಮೃಣಾಲ ಹೆಬ್ಬಾಳಕರ್



ಬೆಳಗಾವಿ: ಬೆಳಗಾವಿ ಗ್ರಾಮೀಣ ಕ್ಷೇತ್ರದ ಹಿಂಡಲಗಾ ಗ್ರಾಮದ ವಿನಾಯಕ ನಗರ ಹಾಗೂ ವಿಜಯ ನಗರದ ರಸ್ತೆ, ಪುಟ್ಪಾತ್ ಹಾಗೂ ಒಳಚರಂಡಿ ನಿರ್ಮಾಣದ ಕಾಮಗಾರಿಗಳಿಗೆ ಸ್ಥಳೀಯ ಜನ ಪ್ರತಿನಿಧಿಗಳು ಹಾಗೂ ಯುವ ಕಾಂಗ್ರೆಸ್ ಮುಖಂಡ ಮೃಣಾಲ ಹೆಬ್ಬಾಳಕರ್ ಭೂಮಿ ಪೂಜೆ ನಡೆಸುವ ಮೂಲಕ ಕಾಮಗಾರಿಗೆ ವಿದ್ಯುಕ್ತ ಚಾಲನೆ ನೀಡಿದರು. ಈ ಸಂದರ್ಭದಲ್ಲಿ ಮಾತನಾಡಿದ ಮೃಣಾಲ ಹೆಬ್ಬಾಳಕರ್, ಗ್ರಾಮೀಣ ಕ್ಷೇತ್ರದಲ್ಲಿ ಅಭಿವೃದ್ದಿ ನಿರಂತರ. ಕ್ಷೇತ್ರದ ಎಲ್ಲ ಭಾಗಗಳಲ್ಲಿ ಒಂದಿಲ್ಲೊಂದು ಅಭಿವೃದ್ಧಿ ಯೋಜನೆ ನಡೆಯುತ್ತಲೇ ಇರುತ್ತವೆ. ರಸ್ತೆ, ನೀರು, ಶಾಲೆ, ದೇವಸ್ಥಾನಗಳ ಜೊತೆಗೆ ಉನ್ನತ ಶಿಕ್ಷಣ ಸಂಸ್ಥೆಗಳು ಮತ್ತು ಯುವಜನತೆಗೆ ಉದ್ಯೋಗ ನೀಡುವಂತಹ ಯೋಜನೆಗಳನ್ನು ತರಲು ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಯೋಜನೆ ಹಾಕಿಕೊಂಡಿದ್ದಾರೆ,

ಆ ಕುರಿತು ಈಗಾಗಲೆ ಪ್ರಯತ್ನ ಆರಂಭಿಸಿದ್ದಾರೆ ಎಂದು ತಿಳಿಸಿದರು. ಈ ಸಮಯದಲ್ಲಿ ಸ್ಥಳೀಯ ನಿವಾಸಿಗಳು, ರಾಹುಲ್ ಉರನಕರ್, ವಿಠ್ಠಲ ದೇಸಾಯಿ, ಬಿ.ಬಿ ಪಾಟೀಲ, ಪ್ರವೀಣ ಪಾಟೀಲ, ಗಜಾನನ ಬಾಂಡೇಕರ್, ಸೀಮಾ ದೇವಕರ್, ಪ್ರೇರಣಾ ಮಿರಜಕರ್ ಮುಂತಾದವರು ಉಪಸ್ಥಿತರಿದ್ದರು.

## ಬೆಳಗಾವಿ ಹುಕ್ಕಾ ಬಾರ್ & ತಂಬಾಕಿನ ಉತ್ಪನ್ನ ಮಾರಾಟ ಮಳಿಗೆ ಮೇಲೆ ಪೋಲೀಸ್ ದಾಳಿ



ಬೆಳಗಾವಿ: ಕಾನೂನು ಬಾಹೀರವಾಗಿ ತಂಬಾಕು ಉತ್ಪನಗಳ ಹುಕ್ಕಾ ಬಾರ್ ಅಂಗಡಿಗಳ ಮೇಲೆ ಟಿಳಕವಾಡಿ ಪೋಲೀಸರು ದಾಳಿ ನಡೆಸಿ 2,56,600 ರೂ.ಮೌಲ್ಯದ ವಿವಿಧ ಕಂಪನಯ ಹುಕ್ಕಾ ಹಾಗೂ ಇಬ್ಬರು ಆರೋಪಿಗಳನ್ನು ಪೊಲೀಸರು ಬಂಧಿಸಿದ್ದಾರೆ. ಖಚಿತ ಮಾಹಿತಿ ಮೇರೆಗೆ ಕಾನೂನು ಸುವ್ಯವಸ್ಥೆಯ ಡಿಸಿಪಿ ರೋಹನ್ ಜಗದೀಶ್ ಮಾರ್ಗದರ್ಶನದಲ್ಲಿ ಮಾಳಮಾರುತಿ, ಮಾರ್ಕೇಟ್ ಹಾಗೂ ಟಿಳಕವಾಡಿ ಪೋಲೀಸರು ಹುಕ್ಕಾ ಬಾರ್ ಮಳಿಗೆಯ ಮೇಲೆ ದಾಳಿ ಮಾಡಿದ್ದಾರೆ. ದಾಳಿಯ ವೇಳೆ 75,500 ರೂ. ಮೌಲ್ಯದ ವಿವಿಧ ಕಂಪನಯ 126 ಹುಕ್ಕಾಗಳು, 62 ಸಾವಿರ ಮೌಲ್ಯದ ವಿವಿಧ ಕಂಪನಯ 51 ರೋಲ್ ಪೇಪರ್, 15,500 ರೂ. ಮೌಲ್ಯದ 30 ವಿವಿಧ ಕಂಪನಯ ಚಾರ್ಕಕೋಲ್, 20,300 ರೂ. ಮೌಲ್ಯದ ವಿವಿಧ ಕಂಪನಯ 120 ಬಾಂಗ್ ಪೈಪ್ ಗಳು, 41,500 ರೂ. ಮೌಲ್ಯದ 25 ಪಾಕೀಟ್ ವಿದೇಶಿ ಸಿಗರೆಟ್, 25,300 ರೂ. ಮೌಲ್ಯದ ವಿವಿಧ ಕಂಪನಯ ತಂಬಾಕಿನ ಪಾಕೆಟ್ ಸೇರಿದಂತೆ 16, 500 ರೂ. ಮೌಲ್ಯದ ವಿವಿಧ ಕಂಪನಯ ಪ್ಲೇವರ್ಸ್ ಪಾಕೆಟ್ ಗಳು ಒಟ್ಟು 2,56,600ಮೌಲ್ಯದ ಸ್ವತ್ತನ್ನು ವಶಪಡಿಸಿಕೊಂಡು, ಮಂಗಳೂರು ಮೂಲದ ಅನಗೋಳದ ರಹವಾಸಿಗಳಾದ ಅಬುಬಕ್ಕರ ಜೈನಾಭಾ ಸಿದ್ಧಿಕ್ (31) ಹಾಗೂ ಶಬಾಬ್ ಶಕೀಲ್ ಅಹ್ಮದ (22) ಆರೋಪಿಯನ್ನು ಬಂಧಿಸಿದ್ದಾರೆ. ಕಾರ್ಯಾಚರಣೆಯಲ್ಲಿ ಎಸಿಪಿ ಸದಾಶಿವ ಕಟ್ಟಿಮನ, ಕಪೀಲ್ ದೇವ ಭಾಗವಹಿಸಿದ್ದರು.

## ಗಿಣಿಗೇರಿ ಗ್ರಾಮದ ಪಕ್ಕದಲ್ಲಿರುವ ಅಲ್ಟ್ರಾಟೆಕ್ ಸಿಮೆಂಟ್ ಫ್ಯಾಕ್ಟರಿ ಧೂಳಿನಿಂದ ರೈತರಿಗೆ ಅನ್ಯಾಯ

ಕೊಪ್ಪಳ : ಗಿಣಿಗೇರಿ ಗ್ರಾಮದಲ್ಲಿ ಇತ್ತೀಚಿಗೆ ಧೂಳು, ಕಲುಷಿತ ವಾತಾವರಣ, ರೈತರ ಬೆಳೆದ ಕೃಷಿ ನಾಶ, ಗ್ರಾಮದ ಜನರಿಗೆ ಅನಾರೋಗ್ಯ ತೊಂದರೆಗಳು ಕಾಣಿಸುತ್ತಿವೆ ಎಂದು ಜಗದೀಶ್ ಆರಂಭಿಸಿದ್ದಾರೆ. ಜಗದೀಶ್ ಹೊಲದ ಪಕ್ಕದಲ್ಲಿ ಸಿಮೆಂಟ್ ಕಾರ್ಖಾನೆ ಇತ್ತು ಕಳೆದ 15 ವರ್ಷ ಗಳಿಂದ ಧೂಳು ಬೆಳೆದ ಮೇಲೆ ಬೆಳೆಯ ಮೇಲೆ ಕುಳಿತು ಇಳುವರಿ ಬರುತ್ತಿಲ್ಲ.ಇದರ ಬಗ್ಗೆ ಹಲವಾರು ಬಾರಿ ಪರಿಹಾರ ಕ್ರಮ ಕೈಗೊಳ್ಳಲು ಕಂಪನಗೆ ಮನವಿ ಮಾಡಿದರು ಯಾವುದೇ ಪರಿಹಾರ ಆಗಲಿ ಧೂಳು ಬರೆದಂತ ತಡೆಗಟ್ಟಲು ಕ್ರಮ ಕೈಗೊಂಡಿಲ್ಲ.ಕೊಪ್ಪಳದ ವಾಯುಮಾಲಿನ್ಯ ನಿಯಂತ್ರಣ ಅಧಿಕಾರಿಗಳಿಗೆ, ಹಾಗೂ ಮಾನ್ಯ ಅಪರಾ ಜಿಲ್ಲಾಧಿಕಾ ರಿಗಳಾದ ಸಾವಿತ್ರಿ ಬಿ ಕಡಿಯವರಿಗೆ ಮನವಿ ಸಲ್ಲಿಸಲಾಯಿತು. ಈ ಸಂದರ್ಭ ದಲ್ಲಿ ಕಿಡಿಗೇರಿ ನಾಗರಿಕ ಹೋರಾಟ ಸಮಿತಿಯ ಮುಖಂಡರಾದ ಮಂಗಳೇಶ್ ರಾಥೋಡ್ ಮತ್ತು ಆನಂದ್ ಮೂರು ಮನ ಮಾತನಾಡಿ ಬಡ ರೈತ ಜಗದೀಶ್ ಅವರಿಗೆ ಸಿಮೆಂಟ್ ಫ್ಯಾಕ್ಟರಿಯಿಂದ ಆಗಿರುವ ಅನ್ಯಾಯವನ್ನು ಕೂಡಲೆ ಸಂಬಂಧಪಟ್ಟ ಅಧಿಕಾರಿಗಳು ಕ್ರಮ ಕೈಗೊಳ್ಳಬೇಕು.ಇಲ್ಲಿವರೆಗೂ ಆಗಿರುವ ನಷ್ಟಕ್ಕೆ ಪರಿಹಾರ ಕೊಡಬೇಕು ಬಡ ಕುಟುಂಬದಿಂದ ಬಂದ ರೈತ ಇವರಿಗೆ ಪರಿಹಾರ ಸಿಗಬೇಕು ಇಲ್ಲವಾದಲ್ಲಿ ಮುಂದಿನ ದಿನದಲ್ಲಿ ಪ್ರತಿಭಟನೆ ಮಾಡಬೇಕಾಗುತ್ತದೆ ಒತ್ತಾಯಿಸಿದರು.ಈ ಸಂದರ್ಭದಲ್ಲಿ ಗಿಣಿಗೇರಿ ನಾಗರಿಕ ಹೋರಾಟ ಸಮಿತಿಯ ಸಂಚಾಲಕ ಶರಣು ಗಡ್ಡಿ ದಾನಪ್ಪ ಹಲಿಗೆರಿ ಆನಂದ್ ಮುರ್ಮನ ಜಗದೀಶ್ ಉ, ಮೌನೇಶ್ ಹಲಿಗೆರಿ ಮುಂತಾದವರು ಭಾಗವಹಿಸಿದ್ದರು.

## ರಾಜ್ಯದಲ್ಲಿ ವರ್ಗಾವಣೆ ಧಂದೆ ಆಗಿದೆ : ಭೀಮಪ್ಪ ಗಡಾದ



ಬೆಳಗಾವಿ: ಸರಕಾರಿ ನೌಕರರ ವರ್ಗಾವಣೆಗಳನ್ನು ಶಿಕ್ಷಣ ಇಲಾಖೆಯ ಮಾದರಿಯಲ್ಲಿ ಕೌನ್ಸಲಿಂಗ್ ಪದ್ಧತಿಯ ರೀತಿಯಲ್ಲಿ ಮಾಡಲು ಕ್ರಮ ಕೈಗೊಳ್ಳಬೇಕೆಂದು ಭೀಮಪ್ಪ ಗಡಾದ ಹೇಳಿದ್ದಾರೆ

ಬೆಳಗಾವಿಯಲ್ಲಿ ಮಾಧ್ಯಮಗಳೊಂದಿಗೆ ಮಾಹಿತಿ ಹಕ್ಕು ಹೋರಾಟಗಾರ ಭೀಮಪ್ಪ ಗಡಾದ ಮಾತನಾಡಿ ಆಡಳಿತದಲ್ಲಿ ಹೆಚ್ಚುತ್ತಿರುವ "ಬ್ರಹ್ಮಾಂಡ ಭ್ರಷ್ಟಾಚಾರ"ವನ್ನು ತಡೆಯಲು ಮತ್ತು ವರ್ಗಾವಣೆಗೆ ಸಂಬಂಧಿಸಿ ಸರಕಾರದ ಸುತ್ತೋಲೆ/ಮಾರ್ಗಸೂಚಿಗಳನ್ನು ಅನುಪಾಲನೆ ಮಾಡುವ ಸಲುವಾಗಿ ಸಚಿವರು/ಶಾಸಕರುಗಳ ಶಿಪಾರಸ್ಸು ಪತ್ರಗಳನ್ನು ಆಧರಿಸಿ ಮಾಡಲಾಗುತ್ತಿರುವ ಸರಕಾರಿ ನೌಕರರ ವರ್ಗಾವಣೆಗಳನ್ನು ಶಿಕ್ಷಣ ಇಲಾಖೆಯ ಮಾದರಿಯಲ್ಲಿ ಕೌನ್ಸಲಿಂಗ್ ಪದ್ಧತಿಯ ಮುಖಾಂತರವಾಗಿ ಮಾಡಲು ಕ್ರಮ ಕೈಗೊಳ್ಳದೇ ಇದ್ದಲ್ಲಿ ಸರಕಾರದ ಹಾಗೂ ವರ್ಗಾವಣೆಗೆ ಶಿಫಾರಸ್ಸು ಪತ್ರಗಳನ್ನು ನೀಡುವವರ ಮತ್ತು ವರ್ಗಾವಣೆ ಆದೇಶಗಳನ್ನು ಮಾಡುವ ಇಲಾಖಾ ಮುಖ್ಯಸ್ಥರ ವಿರುದ್ದ ರಾಜ್ಯ ಉಚ್ಚನ್ಯಾಯಾಲಯದಲ್ಲಿ ಸಾರ್ವಜನಿಕ ಹಿತಾಸಕ್ತಿ ಅರ್ಜಿ ದಾಖಲೀಸಲಾಗುವುದು ಎಂದು ರಾಜಪಾಲರು ಹಾಗೂ ಮುಖ್ಯ ಮಂತ್ರಿಯವರಿಗೆ ಮತ್ತು ಸರಕಾರದ ಮುಖ್ಯ ಕಾರ್ಯದರ್ಶಿಯವರಿಗೆ ಮನವಿ ಸಲ್ಲಿಸ ಲಾಗಿದೆ ಎಂದು ಮಾಹಿತಿ ಹಕ್ಕು ಹೋರಾಟಗಾರ ಭೀಮಪ್ಪ ಗಡಾದ ತಿಳಿಸಿದ್ದಾರೆ.

## ಜಿಮ್ಸನಲ್ಲಿ ಸಿಟಿ ಸ್ಕ್ಯಾನ್ ಉದ್ಘಾಟಿಸಿ ವಿದ್ಯಾರ್ಥಿಗಳಿಗೆ ಕಂಪ್ಯೂಟರ್ ಟ್ಯಾಬ್ ವಿತರಿಸಿದ ಸಚಿವ ಎಚ್.ಕೆ.ಪಾಟೀಲ



ಗದಗ – ಮಾರ್ಚ 13: ಗದಗ ವೈದ್ಯಕೀಯ ವಿದ್ಯಾಲಯ ಸಂಸ್ಥೆ ಆವರಣದಲ್ಲಿ ನೂತನ ಸಿಟಿ ಸ್ಕ್ಯಾನ್ ಹಾಗೂ ವಿದ್ಯಾರ್ಥಿಗಳಿಗೆ ನೂತನ ಬಸ್ ಚಾಲನೆ ಮತ್ತು ಎಸ್.ಸಿ.ಪಿ / ಟಿ.ಎಸ್.ಪಿ ಯೋಜನೆಯಡಿ ಆಯ್ಕೆಯಾದ ಫಲಾನುಭವಿ ವಿದ್ಯಾರ್ಥಿಗಳಿಗೆ ಕಂಪ್ಯೂಟರ್ ಟ್ಯಾಬ್ ಗಳನ್ನು ಗದಗ ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ ವಿತರಿಸಿದರು. ನಂತರ ಮಾತನಾಡಿದ ಅವರು ಜಿಮ್ಸ್ ಸಂಸ್ಥೆಯಲ್ಲಿ ವಿದ್ಯಾರ್ಥಿಗಳು ಉತ್ತಮ ಶಿಕ್ಷಣ ಪಡೆದು ಉನ್ನತ ಹುದ್ದೆಗಳನ್ನು ಅಲಂಕರಿಸಿ ಸಮಾಜ ಸೇವೆಯಲ್ಲಿ ತಮ್ಮನ್ನು ತಾವು ಸಕ್ರಿಯಾವಗಿ ತೊಡಗಿಸಿಕೊಳ್ಳಬೇಕು. ಜಿಮ್ಸ್ ನಲ್ಲಿ ಉತ್ತಮ ಶಿಕ್ಷಣ ಲಭ್ಯವಿದ್ದು ವಿದ್ಯಾರ್ಥಿಗಳು ಹೆಚ್ಚು ಅಂಕ ಗಳಿಸಿ ಸಂಸ್ಥೆಗೆ ಕೀರ್ತಿ ತಂದಿದ್ದಾರೆ ಎಂದರು.ಗದಗ ವೈದ್ಯಕೀಯ ಶಿಕ್ಷಣ (2 ನೇ ಪುಟಕ್ಕೆ)

## ವೈದ್ಯರು, ನರ್ಸ ಹಾಗೂ ಸಿಬ್ಬಂದಿಗಳಿಗೆ ಸಾಮಥ್ರ್ಯಾಭಿವೃದ್ಧಿ ಕಾರ್ಯಾಗಾರ



ಗದಗ ಮಾರ್ಚ 13: ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಮಕ್ಕಳ ರಕ್ಷಣಾ ನಿರ್ದೇಶನಾಲಯ, ಬೆಂಗಳೂರು, ವೈದ್ಯಕೀಯ ವಿಜ್ಞಾನಗಳ ಸಂಸ್ಥೆಗಳು, ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಜಿಲ್ಲಾ ಪೊಲೀಸ್ ಇಲಾಖೆ, ಜಿಲ್ಲಾ ಮಕ್ಕಳ ರಕ್ಷಣಾ ಘಟಕ, ಗದಗ ಇವರ ಸಹಯೋಗದಲಿ ?ಲ ಸೋಮವಾರದಂದು ಬಾಲನ್ಯಾಯ (ಮಕ್ಕಳ ಪಾಲನೆ ಮತ್ತು ರಕ್ಷಣೆ) ಕಾಯ್ದೆ–2015 ಹಾಗೂ ದತ್ತು ಮಾರ್ಗಸೂಚಿಗಳು ವೈದ್ಯರು, ನರ್ಸ ಹಾಗೂ ಸಿಬ್ಬಂದಿಗಳಿಗೆ ಸಾಮಥ್ರ್ಯಾಭಿವೃದ್ಧಿ ತರಬೇತಿ ಕಾರ್ಯಕ್ರಮವವನ್ನು ಜಿಲ್ಲಾ ಪಂಚಾಯತ ಸಭಾಂಗಣದಲ್ಲಿ ಹಮ್ಮಿಕೊಳ್ಳಲಾಯಿತು. ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ರಫೀಕಾ ಹಳ್ಳೂರ ಅವರು ಕಾರ್ಯಕ್ರಮ ಉದ್ಘಾಟಿಸಿ ಮಾತನಾಡುತ್ತಾ ಬಾಲನ್ಯಾಯ (ಮಕ್ಕಳ ಪಾಲನೆ ಮತ್ತು ರಕ್ಷಣೆ) ಕಾಯ್ದೆ–2015 ಹಾಗೂ ದತ್ತು ಮಾರ್ಗಸೂಚಿಗಳು ಕುರಿತು ವೈದ್ಯರು, ನರ್ಸ ಹಾಗೂ ಸಿಬ್ಬಂದಿಗಳಿಗೆ ಸಾಮಥ್ರ್ಯಾಭಿವೃದ್ಧಿ ತರಬೇತಿ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಮಾಹಿತಿ ನೀಡಲು ಉತ್ತಮವಾದ ಸಂಪನ್ಮೂಲ ವ್ಯಕ್ತಿಗಳು ಬಂದಿದ್ದು ಅವರೊಂದಿಗೆ ಮಾಹಿತಿ ಪಡೆದು ತಾವು ಕೂಡಾ ಕಾಯ್ದೆಗಳನ್ನು ಚರ್ಚಿಸುವುದು ಮುಖ್ಯವಾಗಿದೆ ಎಂದು ತಿಳಿಸಿದರು.

ಜೆ.ಸಿ ರೇಶ್ಮಿ ಇವರು ಪೋಕ್ಸೋ ಕಾಯ್ದೆ, ಬಾಲ್ಯವಿವಾಹ ನಿಷೇದ ಕಾಯ್ದೆ ಕುರಿತು ಹಾಗೂ ಸಿಸ್ಟರ್ ಡುಲ್ಸಿನ್, ಬಾಲನ್ಯಾಯ ಕಾಯ್ದೆ (ಮಕ್ಕಳ ಪಾಲನೆ ಮತ್ತು ರಕ್ಷಣೆ) ಕಾಯ್ದೆ , ದತ್ತು ಮಾರ್ಗಸೂಚಿ ಕುರಿತು ಉಪನ್ಯಾಸ ನೀಡಿದರು. ಕಾರ್ಯಕ್ರಮದಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಜಿಲ್ಲಾ ಪೊಲೀಸ್ ಇಲಾಖೆ, ಜಿಲ್ಲಾ ಮಕ್ಕಳ ರಕ್ಷಣಾ ಘಟಕ ಸಿಬ್ಬಂದಿ ವರ್ಗದವರು ಹಾಜರಿದ್ದರು . ಮಲ್ಲಪ್ಪ ಹೊಸಳ್ಳಿ ಕಾರ್ಯಕ್ರಮ ನಿರೂಪಿಸಿದರು.